**All India Radio: Bangalore**
**Regional Bulletin In Kannada**
**23.04.2026 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**23.04.2026 / 6.40 p.m.**

****************

ಮುಖ್ಯಾಂಶಗಳು

೧. ನಾಗರಿಕ ಸೇವಾ ಕೇಂದ್ರಗಳಲ್ಲಿ ಇ-ಸ್ವತ್ತು ಅರ್ಜಿ ಸಲ್ಲಿಸಲು ಅವಕಾಶ - ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ

೨. ರಾಜ್ಯದಲ್ಲಿ ತೈಲ ಹಾಗೂ ಅನಿಲ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಿಲ್ಲ - ಬೆಂಗಳೂರಿನಲ್ಲಿ ತೈಲ ಮಾರುಕಟ್ಟೆ ಕಂಪನಿಗಳಿಂದ ಸ್ಪಷ್ಟನೆ

೩. ರಾಜ್ಯದ ಹಲವೆಡೆ ಕುಡಿಯುವ ನೀರಿನ ಸಮಸ್ಯೆ ಉಲ್ಬಣ; ಸರ್ಕಾರದ ವಿರುದ್ಧ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅಸಮಾಧಾನ

೪. ವಿದ್ಯಾರ್ಥಿಗಳು ಜ್ಞಾನ ಮತ್ತು ಕೌಶಲ್ಯ ಹೆಚ್ಚಿಸಿಕೊಳ್ಳುವಂತೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಕರೆ

೫. ತುಮಕೂರಿನಲ್ಲಿ ನಾಳೆಯಿಂದ ೧೯ ವರ್ಷದೊಳಗಿನವರ ರಾಷ್ಟ್ರೀಯ ಅಥ್ಲೆಟಿಕ್ಸ್ ಸ್ಪರ್ಧೆ; ಸಾವಿರಕ್ಕೂ ಅಧಿಕ ಕ್ರೀಡಾಪಟುಗಳು ಭಾಗಿ

****************

ನಾಗರಿಕರು ಇನ್ನು ಮುಂದೆ ಗ್ರಾಮ ಒನ್, ಕರ್ನಾಟಕ ಒನ್ ಮತ್ತು ಬೆಂಗಳೂರು ಒನ್ ಸೇವಾ ಕೇಂದ್ರಗಳ ಮೂಲಕ ಇ-ಸ್ವತ್ತು ಅರ್ಜಿ ಸಲ್ಲಿಸಬಹುದು ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇ-ಆಡಳಿತ ಇಲಾಖೆಯ ಅಡಿಯಲ್ಲಿನ ನಾಗರಿಕ ಸೇವೆಗಳ ವಿದ್ಯುನ್ಮಾನ ವಿತರಣಾ ನಿರ್ದೇಶನಾಲಯ ಮೂರು ವರ್ಷಗಳ ಅವಧಿಗೆ ಈ ಕುರಿತಂತೆ ಒಪ್ಪಂದ ಮಾಡಿಕೊಂಡಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಭಿವೃದ್ಧಿಪಡಿಸಿರುವ ಇ-ಸ್ವತ್ತು ವ್ಯವಸ್ಥೆಗೆ ರಾಜ್ಯಾದ್ಯಂತ ಇರುವ ಬಾಪೂಜಿ ಸೇವಾ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದು. ಹೊಸ ಖಾತೆ ಪಡೆಯಲು ಇಲಾಖೆ ೪೫ ರೂಪಾಯಿ ಶುಲ್ಕ ವಿಧಿಸಿದೆ.

***************

ನವೋದ್ಯಮ ಹಾಗೂ ನಾವೀನ್ಯತೆ ಬಲಪಡಿಸಲು ಐಡಿಯಾ ಬಾಜ್ ಟೆಕ್ ಪ್ರೈವೆಟ್ ಲಿಮಿಟೆಡ್ ಜೊತೆಗೆ ರಾಜ್ಯ ಸರ್ಕಾರ ಒಪ್ಪಂದಕ್ಕೆ ಅಂಕಿತ ಹಾಕಿದೆ.

ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಸಮ್ಮುಖದಲ್ಲಿ ಒಪ್ಪಂದಕ್ಕೆ ಸಹಿ ಹಾಕಲಾಗಿದ್ದು, ಈ ಒಪ್ಪಂದದಿಂದ ರಾಜ್ಯದಲ್ಲಿ ಪ್ರವರ್ಧಮಾನಕ್ಕೆ ಬರುತ್ತಿರುವ ವಲಯಗಳಲ್ಲಿ ಉದ್ಯಮಶೀಲತೆ ಹೆಚ್ಚಿಸಲು, ನವೋದ್ಯಮಗಳಿಗೆ ನೆರವಾಗಲು ಹಾಗೂ ನಾವೀನ್ಯತೆಗೆ ವೇಗ ದೊರೆಯಲಿದೆ.

ಬಳಿಕ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ಜಾಗತಿಕ ನಾವೀನ್ಯತಾ ಕೇಂದ್ರವಾಗಿ ಕರ್ನಾಟಕದ ನಾಯಕತ್ವವನ್ನು ಮತ್ತಷ್ಟು ಬಲಪಡಿಸುವ ದಿಶೆಯಲ್ಲಿ ಈ ಒಪ್ಪಂದವು ಮಹತ್ವದ ಹೆಜ್ಜೆಯಾಗಿದೆ ಎಂದು ತಿಳಿಸಿದ್ದಾರೆ.

***************

ರಾಜ್ಯದಲ್ಲಿ ತೈಲ ಮತ್ತು ಅದರ ಉತ್ಪನ್ನಗಳ ಸರಬರಾಜು ಸರಾಗವಾಗಿದ್ದು, ಪೆಟ್ರೋಲ್, ಡೀಸೆಲ್, ಎಲ್‌ಪಿಜಿ ಗ್ರಾಹಕರು ಆತಂಕಪಡುವ ಅಗತ್ಯವಿಲ್ಲ ಎಂದು ರಾಜ್ಯಮಟ್ಟದ ತೈಲಕಂಪನಿಗಳ ಸಮಿತಿ ಮುಖ್ಯಸ್ಥರೂ ಹಾಗೂ ಐಒಸಿಎಲ್ ಮುಖ್ಯಸ್ಥರಾದ ಸಿದ್ದಾರ್ಥ್ ಅಗರ್‌ವಾಲ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ತೈಲ ಶುದ್ಧೀಕರಣ ಘಟಕ, ಶೇಖರಣಾ ಘಟಕಗಳು, ಬಾಟ್ಲಿಂಗ್ ಕೇಂದ್ರಗಳು, ಎಲ್‌ಪಿಜಿ ವಿತರಕರು ಪೆಟ್ರೋಲ್ ಉತ್ಪನ್ನಗಳ ಸಮರ್ಪಕ ದಾಸ್ತಾನು ಹೊಂದಿದ್ದಾರೆ ಎಂದು ಹೇಳಿದ್ದಾರೆ.

ಇದೇ ವೇಳೆ, ಆಟೋ ಎಲ್‌ಪಿಜಿ ಅಭಾವ ಪ್ರಸ್ತಾಪಿಸಿದ ಅವರು, ರಾಜ್ಯದಲ್ಲಿ ಶೇಕಡ ೮೦ರಷ್ಟು ಆಟೋ ಎಲ್‌ಪಿಜಿ ವಿತರಕರು ಖಾಸಗಿ ವಲಯದಲ್ಲಿದ್ದು, ಅವರು ವಿತರಣೆ ಮಾಡುವಲ್ಲಿ ಸಮಸ್ಯೆ ಉಂಟಾಗಿದೆ. ಸಾರ್ವಜನಿಕ ವಲಯದ ಆಟೋ ಎಲ್‌ಪಿಜಿ, ಪೆಟ್ರೋಲ್ ಬಂಕ್‌ಗಳು, ವಿತರಣಾ ಸಾಮರ್ಥ್ಯವನ್ನು ಪ್ರತಿನಿತ್ಯ ೫೬ ಮೆಟ್ರಿಕ್ ಟನ್‌ನಿಂದ ೧೦೬ ಮೆಟ್ರಿಕ್ ಟನ್‌ಗೆ ಹೆಚ್ಚಿಸಿದೆ ಎಂದು ಮಾಹಿತಿ ನೀಡಿದ್ದಾರೆ.

ವಾಣಿಜ್ಯ ಬಳಕೆ ಎಲ್‌ಪಿಜಿ ಪೂರೈಕೆಯಲ್ಲಿ ಸ್ವಲ್ಪಮಟ್ಟಿಗೆ ವ್ಯತ್ಯಯ ಉಂಟಾಗಿದ್ದು, ಅಂತಹ ಗ್ರಾಹಕರು ಪಿಎನ್‌ಜಿ ಪೈಪ್‌ಲೈನ್ ಗ್ಯಾಸ್‌ಗೆ ಅರ್ಜಿ ಸಲ್ಲಿಸುವಂತೆ ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಭಾರತ ಸರ್ಕಾರದ ವಾರ್ತಾ ಶಾಖೆಯ ಹೆಚ್ಚುವರಿ ಮಹಾನಿರ್ದೇಶಕರಾದ ಎಸ್.ಜಿ. ರವೀಂದ್ರ ಹಾಗೂ ಪೆಟ್ರೋಲಿಯಂ ಸಂಸ್ಥೆಯ ಅಧಿಕಾರಿಗಳು ಉಪಸ್ಥಿತರಿದ್ದರು.

****************

ರಾಜ್ಯ ಸರ್ಕಾರಕ್ಕೆ ಜನರ ಸಮಸ್ಯೆ ಬಗೆಹರಿಸುವ ಕಿಂಚಿತ್ತೂ ಕಾಳಜಿ ಇಲ್ಲ ಎಂದು ಕೇಂದ್ರದ ಉಕ್ಕು ಮತ್ತು ಭಾರಿ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ, ಉದ್ದೂರು ಹೊಸಳ್ಳಿ ಗ್ರಾಮದಲ್ಲಿಂದು ಮಾತನಾಡಿದ ಅವರು, ರಾಜ್ಯ ಸರ್ಕಾರ ಜನರ ಜೀವನದ ಜೊತೆ ಚೆಲ್ಲಾಟವಾಡುತ್ತಿದೆ ಎಂದು ತಿಳಿಸಿದ್ದಾರೆ.

ರಾಜ್ಯದ ಹಲವಾರು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, ಈ ಬಗ್ಗೆ ಗಮನಹರಿಸುವಂತೆ ಸರ್ಕಾರವನ್ನು ಆಗ್ರಹಿಸಿದ್ದಾರೆ.

****************

ಪ್ರಸ್ತುತ ಭಾರತವು ವಿಶ್ವದಲ್ಲಿ ಉದಯೋನ್ಮುಖ ಶಕ್ತಿಯಾಗಿ ಹೊರಹೊಮ್ಮುತ್ತಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ.

ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ೭೫ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ದೇಶ ಇಂದು ತ್ವರಿತ ಬದಲಾವಣೆ, ತಂತ್ರಜ್ಞಾನ, ನಾವೀನ್ಯತೆ ಮತ್ತು

ಕೃತಕ ಬುದ್ಧಿಮತ್ತೆ, ದತ್ತಾಂಶ ವಿಜ್ಞಾನ, ಜೈವಿಕ ತಂತ್ರಜ್ಞಾನ, ಹಸಿರು ಶಕ್ತಿ, ಸೈಬರ್ ಭದ್ರತೆ ಮತ್ತು ಡಿಜಿಟಲ್ ನಾವೀನ್ಯತೆ ಮುಂತಾದ ಕ್ಷೇತ್ರಗಳಲ್ಲಿ ಮುನ್ನುಗ್ಗುತ್ತಿದ್ದು, ವಿದ್ಯಾರ್ಥಿಗಳು ಜ್ಞಾನ ಮತ್ತು ಕೌಶಲ್ಯಗಳನ್ನು ಹೆಚ್ಚಿಸಿಕೊಳ್ಳುವಂತೆ ಕರೆ ನೀಡಿದ್ದಾರೆ.

***ಧ್ವನಿ*** ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್

ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಮಾತನಾಡಿ ಕರ್ನಾಟಕ ವಿಶ್ವವಿದ್ಯಾಲಯವು ಪಿಂಚಣಿ ಸೇರಿದಂತೆ ಅನೇಕ ಹಣಕಾಸಿನ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಶೇಕಡ ೭೦ರಷ್ಟು ಪಿಂಚಣಿ ನೀಡಲು ಸರ್ಕಾರ ಚಿಂತನೆ ನಡೆಸಿದೆ ಎಂದು ತಿಳಿಸಿದ್ದಾರೆ.

****************

ಎಸ್‌ಎಸ್‌ಎಲ್‌ಸಿ ಪರೀಕ್ಷೆ-೧ರ ಫಲಿತಾಂಶ ಪ್ರಕಟಗೊಂಡಿದ್ದು, ಇದೇ ಮೊದಲ ಬಾರಿಗೆ ಶೇಕಡ ೬೪.೧೦ಯಷ್ಟು ಫಲಿತಾಂಶ ಬಂದಿದೆ. ದಕ್ಷಿಣ ಕನ್ನಡ ಜಿಲ್ಲೆ ಪ್ರಥಮ, ಉಡುಪಿ ದ್ವಿತೀಯ, ಉತ್ತರ ಕನ್ನಡ ತೃತೀಯ ಸ್ಥಾನ ಪಡೆದುಕೊಂಡಿದೆ.

ಈ ಬಾರಿ ಪರೀಕ್ಷೆಗೆ ಹಾಜರಾಗಿದ್ದ ೭ ಲಕ್ಷದ ೭೦ ಸಾವಿರದ ೨೦೬ ವಿದ್ಯಾರ್ಥಿಗಳ ಪೈಕಿ ೭ ಲಕ್ಷದ ೨೪ ಸಾವಿರದ ೭೬೪ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಈ ಬಾರಿಯೂ ಬಾಲಕಿಯರೆ ಮೇಲುಗೈ ಸಾಧಿಸಿದ್ದಾರೆ. ಏಳು ವಿದ್ಯಾರ್ಥಿಗಳು ೬೨೫ಕ್ಕೆ ೬೨೫ ಅಂಕ ಪಡೆಯುವ ಮೂಲಕ ಸಾಧನೆ ಮೆರೆದಿದ್ದಾರೆ.

ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತೀರ್ಣರಾಗಿರುವ ಹಾಗೂ ಹೆಚ್ಚು ಅಂಕಗಳ ಜೊತೆ ವಿಶೇಷ ಸಾಧನೆ ಮಾಡಿರುವ ವಿದ್ಯಾರ್ಥಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದನೆ ಸಲ್ಲಿಸಿದ್ದಾರೆ. ಈ ಬಾರಿಯ ಫಲಿತಾಂಶದಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಯ ಶಿಕ್ಷಕ ವರ್ಗಕ್ಕೂ ಅಭಿನಂದನೆ ತಿಳಿಸಿದ್ದಾರೆ.

ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಕಟಗೇರಿ ಸರ್ಕಾರಿ ಪ್ರೌಢ ಶಾಲೆಯ ಗ್ರಾಮೀಣ ಪ್ರತಿಭೆ ಪ್ರಾರ್ಥನಾ ನಾಗಪ್ಪ ಬಿರಾದಾರ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ೬೨೫ ಕ್ಕೆ ೬೨೫ ಅಂಕ ಗಳಿಸುವುದರ ಮೂಲಕ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ. ಆಕಾಶವಾಣಿಯೊಂದಿಗೆ

ಸಂತಸ ಹಂಚಿಕೊಂಡಿರುವ ಪ್ರಾರ್ಥನಾ, ರ್‍ಯಾಂಕ್ ನಿರೀಕ್ಷೆ ಇತ್ತು. ಆದರೆ, ಪೂರ್ಣ ಅಂಕ ಪಡೆಯುವ ನಿರೀಕ್ಷೆ ಇರಲಿಲ್ಲ ಎಂದು ತಿಳಿಸಿದ್ದಾರೆ

********ಧ್ವನಿ*******ಪ್ರಾರ್ಥನಾ

ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ನಾಗರಬೆಟ್ಟನ ಆರ್ಕ್ಸ್‌ಫರ್ಡ್ ಶಾಲೆಯ ವಿದ್ಯಾರ್ಥಿನಿ ಕುಮಾರಿ ಸೌಜನ್ಯ ಬಸವರಾಜ ಕಂದಕೂರ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದು ಗಮನ ಸೆಳೆದಿದ್ದಾಳೆ.

ಇಂಗ್ಲಿಷ್ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಸೌಜನ್ಯ ೬೨೫ಕ್ಕೆ ೬೨೫ ಅಂಕಗಳನ್ನು ಪಡೆದು ಅಪರೂಪದ ಸಾಧನೆ ಮಾಡಿದ್ದಾಳೆ.

ದಾವಣಗೆರೆಯ ಚನ್ನಗಿರಿ ತಾಲೂಕಿನ ಕಬ್ಬಳ ಗ್ರಾಮದ ವಿದ್ಯಾಲಕ್ಷ್ಮಿ ಶಾಲೆಯ ವಿದ್ಯಾರ್ಥಿ ಎಸ್.ಜಿ.ಭರತ್ ೬೨೫ ಅಂಕ ಗಳಿಸಿ ರಾಜ್ಯಕ್ಕೆ ಮೊದಲ ರ್‍ಯಾಂಕ್ ಪಡೆದಿದ್ದಾನೆ.

****************

ಮಹಿಳಾ ಮೀಸಲಾತಿಯನ್ನು ವಿರೋಧಿಸಿದ ಕಾಂಗ್ರೆಸ್ ನೇತೃತ್ವದ ಮೈತ್ರಿ ಪಕ್ಷಗಳಿಗೆ ದೇಶದ ಮಹಿಳೆಯರೇ ತಕ್ಕ ಉತ್ತರ ನೀಡಲಿದ್ದಾರೆ ಎಂದು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಖಾತೆ ಸಚಿವ ವಿ ಸೋಮಣ್ಣ ತಿಳಿಸಿದ್ದಾರೆ.

ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿರೋಧ ಪಕ್ಷಗಳು ದೇಶದ ಮಹಿಳೆಯರಿಗೆ ಅನ್ಯಾಯ ಎಸಗಿದ್ದು, ದೇಶದ್ಯಾಂತ ವಿರೋಧ ಪಕ್ಷಗಳ ಮಹಿಳಾ ವಿರೋಧಿ ಕಾರ್ಯವನ್ನು ಜನರಿಗೆ ತಿಳಿಸುವ ಕೆಲಸ ಮಾಡಲಾಗುತ್ತದೆ ಎಂದು ಹೇಳಿದ್ದಾರೆ.

ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಮಾತನಾಡಿ, ಮಹಿಳೆಯರ ಮೀಸಲಾತಿಯನ್ನು ವಿರೋಧಿಸುವ ಮುಖಾಂತರ ಕಾಂಗ್ರೆಸ್ ಪಕ್ಷ ಮಹಿಳಾ ವಿರೋಧಿ ಪಕ್ಷ ಎಂದು ಸಾಬೀತು ಪಡಿಸಿಕೊಂಡಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಜನರೇ ತಕ್ಕ ಪಾಠ ಕಲಿಸಲಿದ್ದಾರೆ ಎಂದು ತಿಳಿಸಿದ್ದಾರೆ.

***************

ಕ್ಷೇತ್ರ ಮರುವಿಂಗಡಣೆ ವಿಚಾರದಲ್ಲಿ ಕಾಂಗ್ರೆಸ್ ಸೇರಿದಂತೆ ಅದರ ಮಿತ್ರಪಕ್ಷಗಳು ರಾಜಕಾರಣ ಮಾಡುತ್ತಿದೆ ಎಂದು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೦೨೬ರ ಜನಗಣತಿ ನಂತರ ಕ್ಷೇತ್ರ ಮರುವಿಂಗಡಣೆಯಾದರೆ ದಕ್ಷಿಣ ಭಾರತದ ರಾಜ್ಯಗಳಿಗೆ ದೊಡ್ಡ ಮಟ್ಟದ ನಷ್ಟ ಉಂಟಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಮಹಿಳಾ ಮೀಸಲಾತಿ ಜಾರಿಯಾಗಬೇಕಾದಲ್ಲಿ ಕ್ಷೇತ್ರ ಮರುವಿಂಗಡಣೆಯಾಗಬೇಕು. ಈ ಬಗ್ಗೆ ಕಾಂಗ್ರೆಸ್ ಸಾರ್ವಜನಿಕರಲ್ಲಿ ಸಾಕಷ್ಟು ಗೊಂದಲ ಉಂಟುಮಾಡಿದೆ ಎಂದು ದೂರಿದ್ದಾರೆ.

***************

ತುಮಕೂರಿನಲ್ಲಿ ನಾಳೆಯಿಂದ ಮೂರು ದಿನಗಳ ಕಾಲ ೧೮ ವರ್ಷದೊಳಗಿನವರ ರಾಷ್ಟ್ರೀಯ ಅಥ್ಲೆಟಿಕ್ಸ್ ಸ್ಪರ್ಧೆ ನಡೆಯಲಿದೆ.

ಕ್ರೀಡಾಕೂಟದಲ್ಲಿ ೭೦೮ ಪುರುಷ ಟ್ರ್ಯಾಕ್ ಮತ್ತು ಫೀಲ್ಡ್ ಅಥ್ಲೀಟ್‌ಗಳು ಸೇರಿದಂತೆ ಒಟ್ಟು ಒಂದು ಸಾವಿರದ ೫೮ ಸ್ಪರ್ಧಿಗಳು ಭಾಗವಹಿಸಲಿದ್ದಾರೆ.

ಈ ಕ್ರೀಡಾಕೂಟವು ಮುಂದಿನ ತಿಂಗಳು ಹಾಂಕಾಂಗ್‌ನಲ್ಲಿ ನಡೆಯಲಿರುವ ೧೮ ವರ್ಷದೊಳಗಿನವರ ಏಷ್ಯನ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ಗೆ ಅರ್ಹತಾ ಸ್ಪರ್ಧೆಯಾಗಿರಲಿದೆ.

ಭಾರತ ಅಥ್ಲೆಟಿಕ್ಸ್ ಫೆಡರೇಷನ್ ಈಗಾಗಲೇ ಏಷ್ಯನ್ ಕ್ರೀಡಾಕೂಟಕ್ಕೆ ಅರ್ಹತಾ ಮಾನದಂಡಗಳನ್ನು ಘೋಷಿಸಿದೆ.

********ಮುಕ್ತಾಯ********